**ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಪ್ರತಿವಾದಿ ಪರವಾಗಿ ಶ್ರೀ ಟಿ ಸಿ ಜಿ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು, ಅದನ್ನು ನಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿರುತ್ತೇನೆ.

ಈ ಈ ದಾವೆಯಲ್ಲಿ ನ್ಯಾಯಾಲಯಕ್ಕೆ ಹಾಜರಾಗಿ ಪ್ರತಿವಾದ ಪರ ಸಾಕ್ಷ್ಯ ನುಡಿಯಲು ಪೌರಾಯುಕ್ತರು, ನನ್ನನ್ನು ನೇಮಕ ಮಾಡಿ ದಿನಾಂಕ 7–8–2026 ರಂದು ಮಾಡಿರುವ ಕಛೇರಿ ಆದೇಶದ ದಾಖಲೆಯನ್ನು ಈ ದಿನ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನನ್ನ ಪರವಾಗಿ ನಿಶಾನೆಯಾಗಿ ಗುರುತಿಸುವಂತೆ ಕೋರುತ್ತೇನೆ. ಸಾಕ್ಷಿ ಹಾಜರುಪಡಿಸಿದ ದಾಖಲೆಯನ್ನು ನಿಡಿ–1 ಎಂದು ಗುರುತಿಸಲಾಯಿತು.

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಪರಿಗಣಿಸಿ ಸದರಿ ದಾವೆಯನ್ನು ಖರ್ಚು ಸಹಿತ ವಜಾ ಮಾಡಬೇಕಾಗಿ ಕೋರಿಕೊಳ್ಳುತ್ತೇನೆ.

**ಪಾಟೀ ಸವಾಲುಃ ವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**ಓ.ಹೇ.ಕೇ. ಸರಿ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು,**
**ಭದ್ರಾವತಿ.**